ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 17ನೇ ಮಾರ್ಚ್, 2020

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ)	**ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು**	:	**ಒಂಬತ್ತನೇ ಪಟ್ಟಿ**
ಆ)	**ವರ್ಗಾವಣೆಗೊಂಡ ಪ್ರಶ್ನೆ:-**		
	ದಿನಾಂಕ: 09.03.2020ರ 3ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಆನಂದ ಸಿದ್ದು ನ್ಯಾಮಗೌಡ ಇವರ ಪ್ರಶ್ನೆ ಸಂಖ್ಯೆ: 33(345)	:	ಮಾನ್ಯ ಜಲಸಂಪನ್ಮೂಲ ಸಚಿವರು
ಇ)	**ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು**	:	**ಒಂಬತ್ತನೇ ಪಟ್ಟಿ**

2. ನಿಯಮ 169ರ ಮೇರೆಗೆ ನಿರ್ಣಯ ಮಂಡನೆ

ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಹಾಗೂ ಇತರರು ಕೆಳಕಂಡ ನಿರ್ಣಯವನ್ನು ಮಂಡಿಸುವುದು;

"ಸನ್ಮಾನ್ಯ ಉಪ ಸಭಾಧ್ಯಕ್ಷರು ಈ ಸದನದ ವಿಶ್ವಾಸ ಕಳೆದುಕೊಂಡಿರುತ್ತಾರೆ".

3. ವಿತ್ತೀಯ ಕಾರ್ಯಕಲಾಪಗಳು

1) **ಶ್ರೀ ಬಿ.ಎಸ್. ಯಡಿಯೂರಪ್ಪ, (ಮುಖ್ಯಮಂತ್ರಿಗಳು)** ಅವರು : 2019–20ನೇ ಸಾಲಿನ ಪೂರಕ ಅಂದಾಜುಗಳನ್ನು (3ನೇ ಹಾಗೂ ಅಂತಿಮ ಕಂತು) ಮಂಡಿಸುವುದು.

2) 2020–21ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ
ಹಾಗೂ
1 ರಿಂದ 28 ರವರೆಗಿನ ಅನುದಾನ ಬೇಡಿಕೆಗಳ ಮೇಲೆ ಚರ್ಚೆ

4. ಶಾಸನ ರಚನೆ

<u>ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು</u>

1. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಡಾ: ಅಶ್ವತ್ಥನಾರಾಯಣ ಸಿ.ಎನ್. (ಮಾನ್ಯ ಉಪ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಉನ್ನತ ಶೈಕ್ಷಣಿಕ ಸಂಸ್ಥೆಗಳಲ್ಲಿ ಶಿಕ್ಷಕರ ವೇತನ ಮತ್ತು ನಿವೃತ್ತಿ ವೇತನದ (ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್. ಹಾಲಪ್ಪ, ಸಿದ್ದು ಸವದಿ, ಸುಭಾಷ್ ಗುತ್ತೇದಾರ್ ಹಾಗೂ ಕಳಕಪ್ಪ ಜಿ. ಬಂಡಿ ಇವರುಗಳು** – ನಗರ ಪ್ರದೇಶಗಳಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆಯಾಗದೇ ಇರುವ ನಿವೇಶನಗಳ ಖಾತಾ ದಾಖಲು/ವರ್ಗಾವಣೆಯನ್ನು ಸ್ಥಗಿತಗೊಳಿಸಿರುವುದರಿಂದ ಸಾರ್ವಜನಿಕರಿಗೆ ಉಂಟಾಗಿರುವ ತೊಂದರೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

... 3/ ..

2) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಕೆ. ಶ್ರೀನಿವಾಸಗೌಡ, ಕೆ.ಎಂ. ಶಿವಲಿಂಗೇಗೌಡ, ಎ.ಟಿ. ರಾಮಸ್ವಾಮಿ ಹಾಗೂ ಸಿ.ಎನ್. ಬಾಲಕೃಷ್ಣ ಇವರುಗಳು** – ನಗರಾಭಿವೃದ್ಧಿ ಇಲಾಖೆಯಿಂದ ಕೆಲವು ಕ್ಷೇತ್ರಗಳ ನಗರಸಭೆ/ಪುರಸಭೆಗಳಿಗೆ ಕೋಟ್ಯಾಂತರ ರೂಪಾಯಿಗಳನ್ನು ನಗರೋತ್ಥಾನ ಅನುದಾನ ಯೋಜನೆಯಡಿ ಬಿಡುಗಡೆ ಮಾಡಿರುವುದರಿಂದ ಉಂಟಾಗಿರುವ ತೊಂದರೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

3) **ಶ್ರೀಯುತರುಗಳಾದ ಗೂಳಿಹಟ್ಟಿ ಡಿ. ಶೇಖರ್, ಎಂ. ಚಂದ್ರಪ್ಪ, ಕೆ. ಮಾಡಾಳ್ ವಿರೂಪಾಕ್ಷಪ್ಪ, ಕೆ. ರಘುಪತಿ ಭಟ್ ಹಾಗೂ ಬಿ.ಎಂ. ಸುಕುಮಾರ್ ಶೆಟ್ಟಿ ಇವರುಗಳು** – ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕಿನಲ್ಲಿ ಕೆರೆ–ಕುಂಟೆಗಳಲ್ಲಿನ ಮರಳು ಮಿಶ್ರಿತ ಮಣ್ಣನ್ನು ಉಪಯೋಗಿಸಲು, ಸಾಗಾಣಿಕೆ ಮಾಡಲು ಅವಕಾಶ ಕಲ್ಪಿಸುವ ಹಾಗೂ ಕೂಲಿ ಕಾರ್ಮಿಕರ ಮೇಲೆ ನಡೆಯುತ್ತಿರುವ ಪೊಲೀಸ್ ದೌರ್ಜನ್ಯದ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

4) **ಶ್ರೀಯುತರುಗಳಾದ ರಿಜ್ವಾನ್ ಅರ್ಷದ್, ಯು.ಟಿ. ಅಬ್ದುಲ್ ಖಾದರ್ ಹಾಗೂ ಶ್ರೀಮತಿ ಸೌಮ್ಯ ರೆಡ್ಡಿ ಇವರುಗಳು** – ರಾಜ್ಯದಲ್ಲಿ ಇತ್ತೀಚೆಗೆ ನಡೆದಿರುವ ಐ.ಎಂ.ಎ. ಹಗರಣದಿಂದ ಲಕ್ಷಾಂತರ ಸಾರ್ವಜನಿಕರು ಅನುಭವಿಸುತ್ತಿರುವ ತೊಂದರೆಯ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

5) **ಶ್ರೀಯುತರುಗಳಾದ ಎ. ಮಂಜುನಾಥ್, ನಾಗನಗೌಡ ಕಂದಕೂರ, ಕೆ. ಮಹದೇವ ಹಾಗೂ ಕೆ.ವೈ. ನಂಜೇಗೌಡ ಇವರುಗಳು** – ಕೃಷಿ ಬಳಕೆಗೆ ಉಪಯೋಗಿಸುವ ನೀರಿನ ಟ್ಯಾಂಕರ್‌ಗಳನ್ನು ಸಾರಿಗೇತರ ವಾಹನ ವರ್ಗದಡಿ ನೋಂದಾಯಿಸಲಾಗುತ್ತಿರುವುದರಿಂದ ರೈತರು ಅನುಭವಿಸುತ್ತಿರುವ ತೊಂದರೆಯ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

6) **ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ, ಕೆ.ಎಸ್. ಲಿಂಗೇಶ್, ಅಶ್ವಿನ್ ಕುಮಾರ್ ಎಂ. ಹಾಗೂ ವೆಂಕಟರಾವ್ ನಾಡಗೌಡ ಇವರುಗಳು** – ಶ್ರವಣಬೆಳಗೊಳ ಮತ್ತು ಬೇಲೂರು ವಿಧಾನಸಭಾ ಕ್ಷೇತ್ರಗಳಲ್ಲಿನ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

7) **ಶ್ರೀಯುತರುಗಳಾದ ಕೆ.ಆರ್. ರಮೇಶ್ ಕುಮಾರ್, ಕೃಷ್ಣಬೈರೇಗೌಡ, ಕೆ. ಶ್ರೀನಿವಾಸಗೌಡ, ಕೆ.ವೈ. ನಂಜೇಗೌಡ ಹಾಗೂ ಶರತ್ ಕುಮಾರ್ ಬಚ್ಚೇಗೌಡ ಇವರುಗಳು** – ಕೋಲಾರ ಜಿಲ್ಲೆಯಲ್ಲಿ ಅಂತರ್ಜಲ ವೃದ್ಧಿಪಡಿಸಲು ಕೆ.ಸಿ. ಕಣಿವೆ ಯೋಜನೆಯಡಿ ಕೈಗೊಂಡಿರುವ ಕೆರೆ ತುಂಬಿಸುವ ಕಾರ್ಯವು ವಿಳಂಬವಾಗುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಎ.ಟಿ. ರಾಮಸ್ವಾಮಿ ಅವರು** – ಹಾಸನ ಜಿಲ್ಲೆ ಅರಕಲಗೂಡು ವಿಧಾನಸಭಾ ಕ್ಷೇತ್ರದಲ್ಲಿನ ರಸ್ತೆ ಕಾಮಗಾರಿಗಳಿಗೆ ಹಣ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

2) **ಡಾ॥ ಭರತ್ ಶೆಟ್ಟಿ ವೈ. ಅವರು** – ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾತೃಪೂರ್ಣ ಯೋಜನೆಯಡಿಯಲ್ಲಿ ವಿತರಿಸಲಾಗುವ ಪೌಷ್ಟಿಕ ಆಹಾರವನ್ನು ಫಲಾನುಭವಿಗಳ ಮನೆಗೆ ನೇರವಾಗಿ ವಿತರಿಸಲು ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

3) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಅಣಬೆ ಬೇಸಾಯಗಾರರಿಗೆ ವಿದ್ಯುತ್ ಸಹಾಯಧನ ಸೇರಿದಂತೆ ಇತರೆ ಉತ್ತೇಜನಗಳನ್ನು ನೀಡುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

4) **ಶ್ರೀ ಎಸ್. ಕುಮಾರ್ ಬಂಗಾರಪ್ಪ ಅವರು** – ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ಪಿ.ಯು.ಸಿ. ಅಂಕಪಟ್ಟಿಗಳ ಆಧಾರದ ಮೇಲೆ ಭರ್ತಿ ಮಾಡುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀ ಸುನಿಲ್ ಬಿಳಿಯಾ ನಾಯ್ಕ ಅವರು** – ಉತ್ತರ ಕನ್ನಡ ಜಿಲ್ಲೆಯ ಕೆಲವು ತಾಲ್ಲೂಕಗಳ ಜನವಸತಿ ಪ್ರದೇಶವನ್ನು ಶರಾವತಿ ಅಭಯಾರಣ್ಯ ವ್ಯಾಪ್ತಿಗೆ ಒಳಪಡಿಸಿರುವುದರಿಂದ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

6) **ಶ್ರೀ ವಿ. ಮುನಿಯಪ್ಪ ಅವರು** – ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರವನ್ನು ಬರಪೀಡಿತ ತಾಲ್ಲೂಕು ಎಂದು ಘೋಷಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು** – ಹೊಸದುರ್ಗ ನಗರಕ್ಕೆ ಶಾಶ್ವತವಾಗಿ ನೀರು ಸರಬರಾಜು ಮಾಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಬಾಗೇಪಲ್ಲಿ ಕ್ಷೇತ್ರದ ಚೇಳೂರು ಹೋಬಳಿಯನ್ನು ತಾಲ್ಲೂಕು ಕೇಂದ್ರವಾಗಿ ಘೋಷಿಸಿರುವುದರಿಂದ ತಾಲ್ಲೂಕು ಮಟ್ಟದ ಕಛೇರಿಗಳನ್ನು ಸ್ಥಾಪನೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

... 5/ ..

9) **ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. ಅವರು** – ಬಂಗಾರಪೇಟೆ ಮತಕ್ಷೇತ್ರದ ಪುರಸಭೆ ವ್ಯಾಪ್ತಿಯಲ್ಲಿ ಒಳಚರಂಡಿ ಹಾಗೂ ರಸ್ತೆಯನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

10) **ಶ್ರೀ ಹರೀಶ್ ಪೂಂಜ ಅವರು** – ಬೆಳ್ತಂಗಡಿ ತಾಲ್ಲೂಕಿನ ಸೌತಡ್ಕ ಗಣಪತಿ ದೇವಸ್ಥಾನದಲ್ಲಿ ಗಂಟೆಗಳನ್ನು ಮಾರುವುದಕ್ಕೆ ಅನುಮತಿ ನೀಡಿರುವ ಬಗ್ಗೆ ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

11) **ಶ್ರೀ ಉಮಾನಾಥ ಎ. ಕೋಟ್ಯಾನ್ ಅವರು** – ಗುಡ್ಡಗಾಡು ಬುಡಕಟ್ಟು ಕುಡುಬಿ ಜನಾಂಗವನ್ನು ಪರಿಶಿಷ್ಟ ಪಂಗಡಗಳ ವರ್ಗಕ್ಕೆ ಸೇರಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ) ಗಮನ ಸೆಳೆಯುವುದು.

12) **ಶ್ರೀ ಕೆ.ಆರ್. ರಮೇಶ್ ಕುಮಾರ್ ಅವರು** – ಕೋಲಾರ ಜಿಲ್ಲೆ ಕೆ.ಜಿ.ಎಫ್. ನಗರದಲ್ಲಿನ ಸಂಭ್ರಮ್ ಖಾಸಗಿ ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳ ಹಿತಾಸಕ್ತಿ ಕಾಪಾಡಲು ಕೈಗೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

13) **ಶ್ರೀ ಕೆ. ಮಹದೇವ ಅವರು** – ಕಾವೇರಿ ಜಲಾನಯನ ಪ್ರದೇಶದ ಹಾರಂಗಿ ಯೋಜನೆ ಅಚ್ಚುಕಟ್ಟು ಪ್ರದೇಶದ ಮೂಲಭೂತ ಸೌಕರ್ಯ ಅಭಿವೃದ್ಧಿಯ ಕಾಮಗಾರಿ ಯೋಜನೆಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

14) **ಶ್ರೀ ಸಂಜೀವ್ ಮಠಂದೂರು ಅವರು** – ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಗೇಣಿದಾರರಿಗೆ ಮಾಲೀಕತ್ವವನ್ನು ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

15) **ಶ್ರೀ ಮಸಾಲೆ ಜಯರಾಂ ಅವರು** – ತುರುವೇಕೆರೆ ವಿಧಾನಸಭಾ ಕ್ಷೇತ್ರದಲ್ಲಿರುವ ಪೊಲೀಸ್ ಠಾಣೆಗಳಿಗೆ ಹೊಸ ವಾಹನಗಳನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

16) **ಡಾ॥ ಭರತ್ ಶೆಟ್ಟಿ ವೈ ಅವರು** – ತಾಂತ್ರಿಕ / ಪದವಿ ಕಾಲೇಜುಗಳ ಅತಿಥಿ ಶಿಕ್ಷಕರಿಗೆ ವೇತನ ನೀಡುವಲ್ಲಿ ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಉನ್ನತ ಶಿಕ್ಷಣ) ಗಮನ ಸೆಳೆಯುವುದು.

... 6/ ..

17) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಸಹಕಾರ ಸಂಘಗಳ ಮೂರು ಮಹಾಸಭೆಗಳಿಗೆ ಗೈರುಹಾಜರಾದ ಸದಸ್ಯರು ಚುನಾವಣೆಯಲ್ಲಿ ಮತದಾನ ಮಾಡುವ ಹಕ್ಕನ್ನು ಕಳೆದುಕೊಳ್ಳುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

18) **ಶ್ರೀ ವಿ. ಮುನಿಯಪ್ಪ ಅವರು** – ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆಯ ವಿವಿಧ ಕಾಮಗಾರಿಗಳಿಗಾಗಿ ಮಂಜೂರು ಮಾಡಿದ್ದ ಅನುದಾನವನ್ನು ತಡೆಹಿಡಿದಿರುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ) ಗಮನ ಸೆಳೆಯುವುದು.

19) **ಶ್ರೀ ಎಸ್. ಕುಮಾರ್ ಬಂಗಾರಪ್ಪ ಅವರು** – ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

20) **ಶ್ರೀ ಡಿ. ವೇದವ್ಯಾಸ ಕಾಮತ್ ಅವರು** – ತುಳು ಭಾಷೆಯನ್ನು ಭಾರತ ಸಂವಿಧಾನದ ಅನುಸೂಚಿ 8 ರಲ್ಲಿ ಸೇರಿಸಿ ಘೋಷಿಸುವ ಬಗ್ಗೆ ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವಸಬಲೀಕರಣ ಮತ್ತು ಕ್ರೀಡಾ ಸಚಿವರ ಗಮನ ಸೆಳೆಯುವುದು.

21) **ಡಾ. ಹೆಚ್.ಡಿ. ರಂಗನಾಥ್ ಅವರು** – "ಮಹಿಳಾ ಪೂರಕ ಪೌಷ್ಟಿಕ ಆಹಾರ ತಯಾರಿಕಾ ಘಟಕ (MSPC)"ದಿಂದ ಕಳಪೆ ಗುಣಮಟ್ಟದ ಆಹಾರವನ್ನು ಕುಣಿಗಲ್ ತಾಲ್ಲೂಕಿನ ಅಂಗನವಾಡಿ ಕೇಂದ್ರಗಳಿಗೆ ಪೂರೈಕೆ ಮಾಡುತ್ತಿರುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

22) **ಶ್ರೀ ಕೆ. ಮಹದೇವ್ ಅವರು** – ಪಿರಿಯಾಪಟ್ಟಣ ಮತಕ್ಷೇತ್ರದ ಬುಡಕಟ್ಟು, ಹಾಡಿ ಕಾಲೋನಿಗಳು ಹಾಗೂ ಅರಣ್ಯ ಪ್ರದೇಶಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ) ಗಮನ ಸೆಳೆಯುವುದು.

23) **ಶ್ರೀ ಹೆಚ್.ಕೆ ಕುಮಾರಸ್ವಾಮಿ ಅವರು** – ಉಪ ನೋಂದಣಾಧಿಕಾರಿ ಕಛೇರಿಗಳಲ್ಲಿ ನೋಂದಣಿ ಕಾರ್ಯ ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

24) **ಶ್ರೀ ಶಿವಾನಂದ ಎಸ್. ಪಾಟೀಲ ಅವರು** – ವಿಜಯಪುರ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

25) **ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. ಅವರು** – ಬಂಗಾರಪೇಟೆ ಮೀಸಲು ವಿಧಾನಸಭಾ ಕ್ಷೇತ್ರದಲ್ಲಿ ಶಿಥಿಲಾವಸ್ಥೆಯಲ್ಲಿರುವ ಶಾಲಾ ಕಟ್ಟಡಗಳ ದುರಸ್ತಿಯ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

... 7/ ..

26) **ಶ್ರೀ ಅಪ್ಪಚ್ಚು (ರಂಜನ್) ಅವರು** – ಕೊಡಗಿನಲ್ಲಿ ಸುರಿದ ಭಾರಿ ಮಳೆಯಿಂದಾಗಿ ಹಾರಂಗಿ ಜಲಾಶಯದಲ್ಲಿ ತುಂಬಿರುವ ಹೂಳು ತೆಗೆಯುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

27) **ಶ್ರೀಮತಿ ರೂಪಕಲಾ ಎಂ. ಅವರು** – ಕೋಲಾರ ಚಿನ್ನದ ಗಣಿಯಲ್ಲಿ ಹಲವಾರು ವರ್ಷಗಳ ಕಾಲ ದುಡಿದಿರುವ ಕಾರ್ಮಿಕರ ಕುಟುಂಬಗಳಿಗೆ ಶೌಚಾಲಯಗಳನ್ನೊಳಗೊಂಡಂತೆ ಶಾಶ್ವತ ವಸತಿ ಸೌಲಭ್ಯ ಕಲ್ಪಿಸುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

28) **ಶ್ರೀ ಅಶ್ವಿನ್ ಕುಮಾರ್ ಎಂ. ಅವರು** – ಟಿ. ನರಸೀಪುರ ವಿಧಾನಸಭಾ ಕ್ಷೇತ್ರದಲ್ಲಿರುವ ತಲಕಾಡು ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಘೋಷಣೆ ಮಾಡುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

29) **ಶ್ರೀ ರಾಮಲಿಂಗಾ ರೆಡ್ಡಿ ಅವರು** – ಬಿ.ಟಿ.ಎಂ. ವಿಧಾನಸಭಾ ಕ್ಷೇತ್ರದಲ್ಲಿರುವ ಈಜೀಪುರ – ಕೇಂದ್ರೀಯ ಸದನ ಮೇಲುಸೇತುವೆ ಕಾಮಗಾರಿಗಾಗಿ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

30) **ಶ್ರೀ ಬಿ.ಸಿ. ನಾಗೇಶ್ ಅವರು** – ಬೆಂಬಲ ಬೆಲೆ ಯೋಜನೆಯಡಿ ರಾಗಿಯನ್ನು ಅವೈಜ್ಞಾನಿಕ ರೀತಿಯಲ್ಲಿ ಖರೀದಿಸುತ್ತಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

31) **ಶ್ರೀ ವೆಂಕಟರಾವ್ ನಾಡಗೌಡ ಅವರು** – ಸಿಂಧನೂರು ನಗರ ಸಭೆಯ ವ್ಯಾಪ್ತಿಯಲ್ಲಿ ಸ್ಥಗಿತಗೊಂಡಿರುವ ಕೆರೆ ಕಾಮಗಾರಿ ಮತ್ತು ನೀರು ಸರಬರಾಜು ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

32) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಹಾಸನ ತಾಲ್ಲೂಕಿನ ವಿವಿಧ ಗ್ರಾಮಗಳ ವ್ಯಾಪ್ತಿಯಲ್ಲಿ ಕಡಿಮೆ ದರದಲ್ಲಿ ನಿವೇಶನಗಳನ್ನು ಮಾರಾಟ ಮಾಡಲಾಗುವುದೆಂದು ಸಾರ್ವಜನಿಕರಿಂದ ಹಣ ವಸೂಲಿ ಮಾಡುತ್ತಿರುವ ಪೊಲೀಸ್ ವೃತ್ತ ನಿರೀಕ್ಷಕರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

33) **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಹೋಬಳಿಗಳಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

7. ಅರ್ಧ ಗಂಟೆ ಕಾಲಾವಧಿ ಚರ್ಚೆ

1) **ಶ್ರೀ ಮುನಿಯಪ್ಪ ವಿ. ಅವರು** – **"ವಸತಿ ಯೋಜನೆ"** ಕುರಿತು **ದಿನಾಂಕ: 09.03.2020** ರಂದು ಸದನದಲ್ಲಿ ಉತ್ತರಿಸುವ 3ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 43(759)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2) **ಶ್ರೀ ಹೂಲಗೇರಿ ಡಿ.ಎಸ್. ಅವರು** – **"ಗ್ರಾನೈಟ್ ಘಟಕಗಳು"** ಕುರಿತಂತೆ ಕೇಳಿರುವ ದಿನಾಂಕ: 13.03.2020 ರ 7ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 92(1854)ನ್ನು ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm